# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1350 (1554)

ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ಸಚಿವರು : ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು

ಉತ್ತರಿಸಬೇಕಾದ ದಿನಾಂಕ : 17.03.2026

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಕರ್ನಾಟಕದ ಪಶ್ಚಿಮಘಟ್ಟ ಹಾಗೂ ಕರಾವಳಿ ಪ್ರದೇಶಗಳಲ್ಲಿ ಹವಾಮಾನ ಬದಲಾವಣೆ ಕಾರಣಗಳಿಂದಾಗಿ ಅಡಿಕೆ, ಮೆಣಸು, ತೆಂಗು ಸೇರಿದಂತೆ ಬಹುತೇಕ ತೋಟಗಾರಿಕಾ ಬೆಳೆಗಳು ಹಾನಿಗೊಳಗಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿರುತ್ತದೆ. |
| (ಆ) | ಬಂದಿದ್ದಲ್ಲಿ, ಹವಾಮಾನ ಬದಲಾವಣೆಯು ತೋಟಗಾರಿಕಾ ಬೆಳೆಗಳ ಜೀವನ ಚಕ್ರದ ಎಲ್ಲಾ ಹಂತಗಳ ಮೇಲೆ ನಕಾರಾತ್ಮಕ ಪರಿಣಾಮ ಬೀರುತ್ತಿದ್ದು, ಈ ಬಗ್ಗೆ ಸಮಗ್ರ ಅಧ್ಯಯನದ ತುರ್ತು ಅಗತ್ಯವಿದ್ದರೂ ಸರ್ಕಾರ ಈ ಕುರಿತು ಇದುವರೆಗೆ ಯಾವುದೇ ಕ್ರಮ ವಹಿಸದೇ ಇರಲು ಕಾರಣಗಳೇನು; | ಹವಾಮಾನ ಬದಲಾವಣೆಯ ಪರಿಣಾಮವಾಗಿ ತೋಟಗಾರಿಕೆ ಬೆಳೆಗಳನ್ನು ಬಾಧಿಸುತ್ತಿರುವ ವಿವಿಧ ರೋಗ ಮತ್ತು ಕೀಟಗಳ ಬಗ್ಗೆ ಆಗಿಂದಾಗ್ಗೆ ಪರಿಶೀಲಿಸಿ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br>1. ತೆಂಗಿಗೆ ಬೀಳುವ BHC ಕೀಟ ನಿವಾರಣೆ ರಾಜ್ಯದಲ್ಲಿ 23 ತೋಟಗಾರಿಕೆ ಪರೋಪಜೀವಿ ಉತ್ಪಾದನಾ ಪ್ರಯೋಗಾಲಯಗಳನ್ನು ಸ್ಥಾಪಿಸಲಾಗಿದ್ದು, ರೈತರಿಗೆ ಉಚಿತವಾಗಿ ಪರೋಪ ಜೀವಿಗಳನ್ನು ವಿತರಿಸಲಾಗುತ್ತಿದೆ.<br>2. 2. ತೆಂಗಿನ ಬೆಳೆಗೆ ಬೀಳುವ BHC ಮತ್ತು ಬಿಳಿ ನೊಣದ ಬಾಗೆ ಕುರಿತು ಅಧ್ಯಯನ ನಡೆಸಲು Coconut Pest survey App ಮೂಲಕ ಸರ್ವೆ ಮಾಡಲಾಗುತ್ತಿದೆ.<br>3. ಪ್ರಸಕ್ತ ಸಾಲಿನಲ್ಲಿ ಅಡಿಕೆ ಬೆಳೆಗೆ ಬಾಧಿಸುವ ಎಲೆಚುಕ್ಕೆ ರೋಗ, ಹಳದಿ ಎಲೆ ರೋಗ ಹಾಗೂ ಕೊಳೆ ರೋಗಗಳ ನಿರ್ವಹಣೆಗಾಗಿ CPCRI (Central Plantation Crops Research Institute), |

| | | |
|---|---|---|
| | | ಕಾಸರಗೋಡು ಸಂಸ್ಥೆಯ ಪ್ಯಾಕೇಜ್ ಶಿಫಾರಸ್ಸು ಮಾಡಿದ್ದು, ಈ ಅನ್ವಯ ಫೈಟೋಸಾನಿಟರಿ (Phytosanitory) ಕ್ರಮಗಳ ಅಳವಡಿಕೆ (ರೋಗ ಬಾಧಿತ ಸಸ್ಯದ ಭಾಗಗಳನ್ನು ತೆಗೆಯುವುದು ಮತ್ತು ನಾಶಪಡಿಸುವುದು), ಸಸ್ಯ ಸಂರಕ್ಷಣಾ ಕ್ರಮಗಳು ಹಾಗೂ ಪೋಷಕಾಂಶಗಳ ಸಮಗ್ರ ನಿರ್ವಹಣೆಗೆ ಒಟ್ಟಾರೆ ರೂ.57776.33 ಲಕ್ಷಗಳ ಪ್ರಸ್ತಾವನೆಯನ್ನು ಸಿದ್ಧಪಡಿಸಲಾಗಿದೆ. ಇದರಲ್ಲಿ NHM-MIDH ಮಾರ್ಗಸೂಚಿಯನ್ವಯ ಶೇ.30 ರಷ್ಟು ಸಹಾಯಧನದಂತೆ ಒಟ್ಟು ರೂ.17332.90 ಲಕ್ಷಗಳ (ಕೇಂದ್ರ ಸರ್ಕಾರದ ಪಾಲು ರೂ.10399.74 ಲಕ್ಷಗಳು (60%) ಹಾಗೂ ರಾಜ್ಯ ಸರ್ಕಾರದ ಪಾಲು ರೂ.6933.14 ಲಕ್ಷಗಳು (40%)) ಅನುದಾನ ಕೋರಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.<br><br>4. ಕೇಂದ್ರ ಸರ್ಕಾರದ ವತಿಯಿಂದ ನಿರ್ದೇಶಕರು, CPCRI, ಕಾಸರಗೋಡು ರವರ ಅಧ್ಯಕ್ಷತೆಯಲ್ಲಿ ರಚಿಸಿರುವ ವೈಜ್ಞಾನಿಕ ಸಮಿತಿಯ ಶಿಫಾರಸ್ಸಿನಂತೆ ಕಪ್ಪುತಲೆ ಹುಳುವಿನ ನಿಯಂತ್ರಣಕ್ಕೆ ತಾಕುಗಳ ನೈರ್ಮಲ್ಯಗೊಳಿಸುವುದು, ಬಾಧಿತ ಮರದ ಎಲೆ, ಕಾಂಡ ಕತ್ತರಿಸಿ ನಾಶಪಡಿಸುವುದು, ಪರೋಪ ಜೀವಿಗಳ ಉತ್ಪಾದನೆ ಮಾಡಿ ವಿತರಿಸುವುದು, ಪರೋಪ ಜೀವಿಗಳ ಉತ್ಪಾದನೆಗೆ ಪ್ರಯೋಗಶಾಲೆಗಳ ನಿರ್ಮಾಣ ಹಾಗೂ ಉನ್ನತಿಕರಣಗೊಳಿಸುವುದು, ಬಿಳಿನೊಣ ಬಾಧೆಯ ನಿಯಂತ್ರಣಕ್ಕೆ ಬೇವಿನ ಎಣ್ಣೆ, ಐಸೇರಿಯಾ ಜೈವಿಕ ಶಿಲೀಂದ್ರ ಕೀಟನಾಶಕ/ಸಿಂಪ್ಲಿಸಿಲಿಯಂ ಯನ್ನು ಸಿಂಪಡಿಸುವುದು, ಸಮಗ್ರ ಕೀಟ ಮತ್ತು ರೋಗಗಳ ನಿರ್ವಹಣೆಗಾಗಿ ಬೇವಿನಹಿಂಡಿ, ಜೈವಿಕ ಗೊಬ್ಬರಗಳು, ಟ್ರೈಕೊಡರ್ಮಾ, ಮಣ್ಣು ಸುಧಾರಕಗಳು ಹಾಗೂ ಪೊಟ್ಯಾಶ್ ಗೊಬ್ಬರವನ್ನು ನೀಡಲು, ಈ ಕೀಟಗಳ ನಿಯಂತ್ರಣಕ್ಕೆ CPCRI (ಕೇಂದ್ರ ತೋಟದ ಬೆಳೆಗಳ ಸಂಶೋಧನಾ ಕೇಂದ್ರ), ಕಾಸರಗೋಡು ಹಾಗೂ NBAIR (ರಾಷ್ಟ್ರೀಯ ಕೃಷಿ ಕೀಟ ಸಂಪನ್ಮೂಲಗಳ ಬ್ಯೂರೋ), ಬೆಂಗಳೂರು ಗಳಲ್ಲಿ ಸಂಶೋಧನೆಯನ್ನು ಕೈಗೊಳ್ಳುವುದು ಸೇರಿದಂತೆ ಪ್ಯಾಕೇಜ್ ರೂಪಿಸಲಾಗಿದೆ. ಈ |

| | | |
|---|---|---|
| | | ಅನ್ವಯ ಪ್ರಮುಖ ತೆಂಗು ಬೆಳೆಯುವ ಜಿಲ್ಲೆಗಳಿಗೆ ರೂ. 791.05 ಕೋಟಿಗಳ ಪ್ರಸ್ತಾವನೆಯನ್ನು CPCRI, ಕಾಸರಗೋಡು ರವರ ಮೂಲಕ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿರುತ್ತದೆ.<br><br>5. ತೆಂಗಿನ ಕಪ್ಪುತಲೆ ತಲೆಹುಳುವಿನ ಬಾಧಿತ ಪ್ರದೇಶದಲ್ಲಿ ಇಲಾಖಾ ಅಭಿವೃದ್ಧಿ ಪಡಿಸಿರುವ ಮೊಬೈಲ್ ಆಪ್ ಮೂಲಕ ಕಪ್ಪುತಲೆ ಹುಳುವಿನ ಜೊತೆಗೆ ಬಿಳಿನೊಣದ ಸಮೀಕ್ಷೆ ಕೈಗೊಳ್ಳಲಾಗುತ್ತಿದೆ.<br>6. ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗ ರವರ ತಜ್ಞರ ಸಹಯೋಗದೊಂದಿಗೆ ಅಡಿಕೆ ತೋಟಗಳ ಪೋಷಕಾಂಶ ನಿರ್ವಹಣೆ, ಬಸಿ ಕಾಲುವೆಗಳನ್ನು ಮಾಡುವುದು, ಹಸಿರೆಲೆ ಗೊಬ್ಬರದ ಬಳಕೆ ಹಾಗೂ ರಸ ಗೊಬ್ಬರಗಳ ಪೂರೈಕೆಗಳ ಕುರಿತು ಕೈಪಿಡಿ, ಕರಪತ್ರಗಳು ಮತ್ತಿತರೆ ಸಮೂಹ ಮಾಧ್ಯಮಗಳು ಹಾಗೂ ತರಬೇತಿ ಮತ್ತು ಕಾರ್ಯಾಗಾರಗಳ ಮೂಲಕ ರೈತರಿಗೆ ಅರಿವು ಮೂಡಿಸಲಾಗುತ್ತಿದೆ. ಪಶ್ಚಿಮಘಟ್ಟ ಹಾಗೂ ಕರಾವಳಿ ಪ್ರದೇಶದಲ್ಲಿ ಬರುವ ಜಿಲ್ಲೆಗಳ ಬೆಳೆಗಳ ಅನುಗುಣವಾಗಿ ಬೆಳೆಗಳಿಗೆ ಬೇಕಾಗಿರುವ ಪೋಷಕಾಂಶಗಳು ಹಾಗೂ ರೋಗ ಮತ್ತು ಕೀಟ ನಿಯಂತ್ರಣದ ಬಗ್ಗೆ ಕಾಲಕಾಲಕ್ಕೆ ತೋಟಗಾರಿಕೆ ಇಲಾಖೆ, ಕೃಷಿ ವಿಜ್ಞಾನ ಕೇಂದ್ರ, ಕೇಂದ್ರೀಯ ತೋಟದ ಬೆಳೆಗಳ ಸಂಶೋಧನಾ ಸಂಸ್ಥೆ (CPCRI), ವಿಠ್ಠಳ, ZAHRS, ಮೂಡಿಗೆರೆ, ತೋಟಗಾರಿಕೆ ಮತ್ತು ಕೃಷಿ ಸಂಶೋಧನಾ ಕೇಂದ್ರ (AHRS), ಮಡಿಕೇರಿ, ಭಾರತೀಯ ಕೃಷಿ ಸಂಶೋಧನಾ ಮಂಡಳಿ (ICAR) ಸಂಸ್ಥೆಗಳು ಮಾಹಿತಿಯನ್ನು ರೈತರಿಗೆ ನೀಡಿ ಅರಿವು ಮೂಡಿಸಲಾಗುತ್ತಿದೆ.<br><br>7. ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ ಕಾರ್ಯಕ್ರಮದಡಿ ತೋಟಗಾರಿಕೆ ಬೆಳೆಗಳಿಗೆ ಹನಿನೀರಾವರಿಯನ್ನು ಅಳವಡಿಸಲು ಮೊದಲ 2.00 ಹೆಕ್ಟೇರ್ ವರೆಗೆ ಶೇ.90 ರಷ್ಟು ಮತ್ತು 2 ರಿಂದ 5 ಹೆಕ್ಟೇರ್ ವರೆಗೆ ಶೇ.45 ರಷ್ಟು ಸಹಾಯಧನವನ್ನು ನೀಡಲಾಗುತ್ತಿದೆ.<br><br>8. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ ಮತ್ತು |

| | | |
|---|---|---|
| | | ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ನೀರಿನ ಸಂಗ್ರಹಣೆ ಮಾಡಲು ಕೃಷಿ ಹೊಂಡ ತೆಗೆಯುವ ರೈತರಿಗೆ ಶೇ.75 ರಷ್ಟು ಸಹಾಯಧನ ನೀಡಲಾಗುತ್ತಿದೆ.<br>9. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ Automated weather stations ಸ್ಥಾಪಿಸಲು ರೈತರಿಗೆ ಶೇ.50 ರಷ್ಟು ಸಹಾಯಧನ ನೀಡಲಾಗುತ್ತಿದೆ.<br>10. ಕರಾವಳಿ ಮತ್ತು ಪಶ್ಚಿಮ ಘಟ್ಟದ (ಮಲೆನಾಡು) ಜಿಲ್ಲೆಗಳು ಸೇರಿದಂತೆ ರಾಜ್ಯದಲ್ಲಿ ಮರು ವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆ [Restructured Weather Based Crop Insurance Scheme (RWBCIS)] ಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಹವಾಮಾನದ ಏರುಪೇರುಗಳಿಂದ ಉಂಟಾಗುವ ಬೆಳೆ ನಷ್ಟಕ್ಕೆ ರೈತರಿಗೆ ಆರ್ಥಿಕ ಭದ್ರತೆಯನ್ನು ಒದಗಿಸುವ ದೃಷ್ಟಿಯಿಂದ ಅಡಿಕೆ, ಕಾಳುಮೆಣಸು, ದಾಳಿಂಬೆ, ಹಸಿರು ಮೆಣಸಿನಕಾಯಿ, ಶುಂಠಿ, ದ್ರಾಕ್ಷಿ ಮತ್ತು ಮಾವು ಬೆಳೆಗಳನ್ನು ಅಧಿಸೂಚಿಸಲಾಗಿರುತ್ತದೆ.<br><br>ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರವು ರಾಜ್ಯದ ಹವಾಮಾನ ಪರಿಸ್ಥಿತಿಗಳಿಗೆ ಸಂಬಂಧಿಸಿದ ನಿಜ ಸಮಯದ ದತ್ತಾಂಶಗಳನ್ನು ಕಲೆಹಾಕಿ ದತ್ತಾಂಶಗಳನ್ನು ಪರಿಶೀಲಿಸಿ, ನಕ್ಷೆಗಳು ಮತ್ತು ಹವಾಮಾನ ವರದಿ, ಮುನ್ಸೂಚನೆ ಮತ್ತು ಬರಗಾಲ ಘೋಷಣೆಗೆ ಅಗತ್ಯವಿರುವ ಮಾಹಿತಿಗಳನ್ನು ನೀಡುವ ಕಾರ್ಯವನ್ನು ಮಾಡಲಾಗುತ್ತಿದೆ. |
| (ಇ) | ಪಶ್ಚಿಮಘಟ್ಟ ಹಾಗೂ ಕರಾವಳಿ ಪ್ರದೇಶಗಳಲ್ಲಿ ಹವಾಮಾನ ಬದಲಾವಣೆಯಿಂದ ತೋಟಗಾರಿಕಾ ಬೆಳೆಗಳ ಉತ್ಪಾದನೆ ಗಣನೀಯವಾಗಿ ಕುಸಿದಿದ್ದು, ಈ ಸಮಸ್ಯೆಗೆ ಪರಿಹಾರ ದೊರಕಿಸಲು ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು; ಹಾಗೂ ಸಾಧಿಸಿರುವ ಪ್ರಗತಿಯ | ಮೇಲಿನ (ಆ) ರಲ್ಲಿ ಉತ್ತರಿಸಲಾಗಿರುತ್ತದೆ. |

| | | |
|---|---|---|
| | ವಿವರಗಳೇನು; | |
| (ಈ) | ಯಾವ ಕಾಲಮಿತಿಯೊಳಗೆ, ಹವಾಮಾನ ಬದಲಾವಣೆಯಿಂದ ಆಗುತ್ತಿರುವ ಸದರಿ ನಕಾರಾತ್ಮಕ ಗಂಭೀರ ಪರಿಣಾಮಗಳ ಕುರಿತು ಸಮಗ್ರ ಅಧ್ಯಯನ ನಡೆಸಿ ಸೂಕ್ತ ಹಾಗೂ ಅಗತ್ಯ ಪರಿಹಾರೋಪಾಯಗಳನ್ನು ಅನುಷ್ಠಾನಕ್ಕೆ ತರಲಾಗುವುದು? | ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರವು ರಾಜ್ಯದ ಹವಾಮಾನ ಪರಿಸ್ಥಿತಿಗಳಿಗೆ ಸಂಬಂಧಿಸಿದ ನಿಜ ಸಮಯದ ದತ್ತಾಂಶಗಳನ್ನು ಕಲೆಹಾಕಿ ದತ್ತಾಂಶಗಳನ್ನು ಪರಿಶೀಲಿಸಿ, ನಕ್ಷೆಗಳು ಮತ್ತು ಹವಾಮಾನ ವರದಿ, ಮುನ್ಸೂಚನೆ ಮತ್ತು ಬರಗಾಲ ಘೋಷಣೆಗೆ ಅಗತ್ಯವಿರುವ ಮಾಹಿತಿಗಳನ್ನು ನೀಡುವ ಕಾರ್ಯವನ್ನು ಮಾಡಲಾಗುತ್ತಿದೆ. ಈ ಬಗ್ಗೆ ತೋಟಗಾರಿಕೆ ಬೆಳೆಗಳಿಗೆ ಪ್ರತ್ಯೇಕವಾದ ಸಮಗ್ರ ಅಧ್ಯಯನ ನಡೆಸುವ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು. |

ಸಂಖ್ಯೆ: HORTI 119 HGM 2026

(ಎಸ್. ಎಸ್. ಮಲ್ಲಿಕಾರ್ಜುನ್)
ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು